ಈ ವ್ಯವಸ್ಥೆಯಿಂದ ಅನುದಾನವನ್ನು ನಿಗಮದಿಂದ ಜಿಲ್ಲಾ ಪಂಚಾಯತಿಗೆ, ಜಿಲ್ಲಾ ಪಂಚಾಯತಿಯಿಂದ ತಾಲ್ಲೂಕು ಪಂಚಾಯತಿಗೆ ಹಾಗೂ ತಾಲ್ಲೂಕು ಪಂಚಾಯತಿಯಿಂದ ಗ್ರಾಮ ಪಂಚಾಯತಿಗೆ ವರ್ಗಾಯಿಸುವಲ್ಲಿ ಆಗುವ ವಿಳಂಬವನ್ನು ಸಹ ತಪ್ಪಿಸಲಾಗಿದೆ.

583 (1179) ಶ್ರೀಮತಿ ಶಕುಂತಲಾ ಟಿ. ಶೆಟ್ಟಿ (ಪುತ್ತೂರು) :- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಪ್ರೌಢ ಶಾಲೆಗಳಿಗೆ ಅಕ್ಷರ ದಾಸೋಹದ ಯೋಜನೆಯ ಬಿಸಿಯೂಟಕ್ಕೆ ನೀಡುವ ಹಣ ಸಾಕಾಗುತ್ತಿದೆಯೇ; ಸಾಕಾಗದಿದ್ದಲ್ಲಿ ಹೆಚ್ಚುವರಿ ಹಣ ಪಾವತಿಸುವವರು ಯಾರು;

ಆ) ಈಗ ಹಣ ನೀಡುವ ಅನುದಾನ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅನುದಾನ ಹೆಚ್ಚಿಸುವ ಅಭಿಪ್ರಾಯ ಸರ್ಕಾರದ ಮುಂದಿದೆಯೇ; ಇಲ್ಲದಿದ್ದಲ್ಲಿ ಕಾರಣವೇನು ವಿವರ ಒದಗಿಸುವುದು?

ಶ್ರೀ ಬಸವರಾಜ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಸರ್ಕಾರಿ ಹಾಗೂ ಅನುದಾನಿತ ಪ್ರೌಢ ಶಾಲೆಗಳಲ್ಲಿ ಅಕ್ಷರ ದಾಸೋಹ ಯೋಜನೆ ಜಾರಿಗೊಳಿಸಲು ಅವಶ್ಯವಿರುವಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಆ) ಈಗಾಗಲೇ ಒಟ್ಟು ರೂ.33017.40ಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ಜಿಲ್ಲಾ ಪಂಚಾಯತ್ ಲಿಂಕ್ ಡಾಕ್ಯುಮೆಂಟ್ ಮೂಲಕ ಹಂಚಿಕೆ ಮಾಡಲಾಗಿದೆ. ಜಿಲ್ಲೆಗಳಿಂದ ಹೆಚ್ಚುವರಿ ಕೋರಿಕೆ ಬಂದಲ್ಲಿ, ಹೆಚ್ಚುವರಿ ಅನುದಾನ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುವುದು.

584 (1180) ಶ್ರೀಮತಿ ಶಕುಂತಲಾ ಟಿ. ಶೆಟ್ಟಿ (ಪುತ್ತೂರು) :- ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇಂದಿರಾ ಆವಾಜ್ ಯೋಜನೆಯಡಿಯಲ್ಲಿ ಕೆಲವು ಗ್ರಾಮ ಪಂಚಾಯ್ತಿಗಳಿಗೆ ಗುರಿ ನಿಗದಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;